ಆ) ಹಾಗಿದ್ದಲ್ಲಿ, ಈ ವಿಶ್ವವಿದ್ಯಾನಿಲಯವನ್ನು ಪ್ರಸಕ್ತ ಸಾಲಿನಲ್ಲಿಯೇ ಪ್ರಾರಂಭಿಸಲಾಗುವುದೇ;

ಇ) ಈ ತೋಟಗಾರಿಕಾ ವಿಶ್ವ ವಿದ್ಯಾನಿಲಯಕ್ಕೆ ನಿಗದಿಪಡಿಸಿರುವ ಮೊತ್ತವೆಷ್ಟು?

ಶ್ರೀ ಉಮೇಶ್ ವಿ ಕತ್ತಿ(ತೋಟಗಾರಿಕೆ ಮತ್ತು ಬಂದೀಖಾನೆ ಸಚಿವರು):

ಅ) ಕೊಪ್ಪಳ ಜಿಲ್ಲೆಯಲ್ಲಿ ತೋಟಗಾರಿಕೆ ಕಾಲೇಜನ್ನು ಮಾತ್ರ ಪ್ರಾರಂಭಿಸುವುದಾಗಿ ಆಯವ್ಯಯದ ಅಧಿವೇಶನದ ಸಮಯದಲ್ಲಿ ಘೋಷಣೆ ಮಾಡಿ 2010–11ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಕೊಪ್ಪಳದಲ್ಲಿ ತೋಟಗಾರಿಕೆ ಕಾಲೇಜನ್ನು ಹೊಸದಾಗಿ ಆರಂಭಿಸಲು ಸರ್ಕಾರ ನಿರ್ಧರಿಸಿದೆ.

ಆ) ಸರ್ಕಾರದ ಆದೇಶ ಸಂಖ್ಯೆ: ತೋಇ 155 ತೋಇವಿ 2010, ದಿನಾಂಕ:02.05.2010ರನ್ವಯ, ಪ್ರಸಕ್ತ 2010–11ನೇ ಸಾಲಿನಲ್ಲಿಯೇ ಕೊಪ್ಪಳ ಜಿಲ್ಲೆಯ ಮುನಿರಾಬಾದಿನಲ್ಲಿ ತೋಟಗಾರಿಕೆ ಕಾಲೇಜನ್ನು ಪ್ರಾರಂಭಿಸಲಾಗುವುದು.

ಇ) ಈ ತೋಟಗಾರಿಕೆ ಕಾಲೇಜನ್ನು ಸ್ಥಾಪಿಸಲು 2010–11ನೇ ವರ್ಷಕ್ಕೆ 5 ಕೋಟಿ ರೂಪಾಯಿ ನಿಗದಿಪಡಿಸಲಾಗಿದೆ.

ಕೊಪ್ಪಳ ನಗರಕ್ಕೆ ಬೈಪಾಸ್ ರಸ್ತೆ

191(540) ಶ್ರೀ ಕರಡಿ ಸಂಗಣ್ಣ ಅಮರಪ್ಪ:(ಕೊಪ್ಪಳ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಪ್ಪಳ ನಗರಕ್ಕೆ ಬೈಪಾಸ್ ರಸ್ತೆ ನಿರ್ಮಾಣ ಹಾಗೂ ರಸ್ತೆ ಅಗಲೀಕರಣ ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

ಆ) ಈ ಕಾಮಗಾರಿಯನ್ನು ಪ್ರಸಕ್ತ ಸಾಲಿನಲ್ಲಿಯೇ ಕೈಗೆತ್ತಿಕೊಳ್ಳಲಾಗುವುದೇ;

ಇ) ಹಾಗಿದ್ದಲ್ಲಿ, ಈ ಕಾಮಗಾರಿಗಳಿಗೆ ನಿಗದಿಪಡಿಸಿರುವ ಅನುದಾನವೆಷ್ಟು (ವಿವರ ನೀಡುವುದು);

ಈ) ಕೊಪ್ಪಳ ತಾಲ್ಲೂಕಿನಲ್ಲಿ ಭಾರಿ ಮತ್ತು ಮಧ್ಯಮ ಕೈಗಾರಿಕೆಗಳು ಹೆಚ್ಚಾಗಿದ್ದು, ಅತೀ ಹೆಚ್ಚು ಸರಕು ಸಾಗಾಣಿಕೆ ವಾಹನಗಳಿಂದ ರಸ್ತೆಗಳು ಸಂಪೂರ್ಣ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಲ-೨೪೨-೫೯

ಊ) ಹಾಗಿದ್ದಲ್ಲಿ ಈ ರಸ್ತೆಗಳನ್ನು ದುರಸ್ತಿಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಸಿ ಎಂ ಉದಾಸಿ(ಲೋಕೋಪಯೋಗಿ ಸಚಿವರು):

ಅ) ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವತಿಯಿಂದ ಎನ್.ಹೆಚ್.ಡಿ.ಪಿ. ಫೇಸ್–4ಬಿರ ಅಡಿಯಲ್ಲಿ ಅಂಕೋಲದಿಂದ ಹೊಸಪೇಟೆವರೆಗಿನ ರಾಷ್ಟ್ರೀಯ ಹೆದ್ದಾರಿ–63ರ ರಸ್ತೆಯನ್ನು ಪೇವ್ಡ್ ಶೋಲ್ಡರ್ ನೊಂದಿಗೆ ಎರಡು ಪಥದ ರಸ್ತೆಯನ್ನಾಗಿ ಬಲಪಡಿಸುವ ಹಾಗೂ ಅಗಲೀಕರಣಗೊಳಿಸುವ (10 ಮೀ.ಅಗಲ) ಕಾಮಗಾರಿಯ ಬಗ್ಗೆ ಈಗಾಗಲೇ ಸರ್ವೆ ಕಾರ್ಯ ಹಾಗೂ ಯೋಜನೆ ತಯಾರಿಸಲು ತಾಂತ್ರಿಕ ಸಮಾಲೋಚಕರನ್ನು ನೇಮಿಸಲಾಗಿದೆ.

ಕೊಪ್ಪಳ ಬೈಪಾಸ್ ರಸ್ತೆ ನಿರ್ಮಾಣವನ್ನು ಸದರಿ ರಸ್ತೆಯ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯ ಒಂದು ಮುಖ್ಯ ಭಾಗವಾಗಿ ಅಳವಡಿಸುವಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರೆಗೆ ತಿಳಿಸಲಾಗಿದ್ದು ಅದರಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ಈಗಾಗಲೇ ಕ್ರಮ ಕೈಗೊಂಡಿದ್ದಾರೆ.

ಆ) ಕರಡು ಯೋಜನಾ ವರದಿ ತಯಾರಿಸುವ ಕಾರ್ಯವನ್ನು ದಿನಾಂಕ 31.3.2010ರ ಕರಾರು ಒಪ್ಪಂದದಂತೆ ಮೆ:ವಿಲ್‌ಬರ್‌ಸ್ಮಿತ್ ಅಸೋಸಿಯೇಟ್ಸ್‌ರವರಿಗೆ ವಹಿಸಲಾಗಿದ್ದು, ಈ ಕಾರ್ಯವನ್ನು ಪೂರ್ಣಗೊಳಿಸಲು 10 ತಿಂಗಳು ಅವಧಿಯಿರುವುದಾಗಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿ ನೀಡಿರುತ್ತಾರೆ. ಕರಡು ಯೋಜನಾ ವರದಿಯ ತಯಾರಿಕೆಯ ನಂತರ ಅಲೈನ್‌ಮೆಂಟ್‌ಗೆ ಒಪ್ಪಿಗೆ ದೊರೆತು ಭೂಸ್ವಾಧೀನ ಪ್ರಕ್ರಿಯೆಯನ್ನು ಪೂರೈಸಿದ ನಂತರ ವಿವಿಧ ಹಂತಗಳ ಟೆಂಡರ್ ಪಕ್ರಿಯೆ (ಆರ್‌ಎಫ್‌ಕ್ಯೂ, ಆರ್‌ಎಫ್‌ಸಿ ಇತರೆ) ನಚಿತರ ಕಾಮಗಾರಿಯನ್ನು ಪ್ರಾರಂಭಿಸಬೇಕಾಗಿರುವುದರಿಂದ ಪ್ರಸಕ್ತ ಸಾಲಿನಲ್ಲಿ ಕಾಮಗಾರಿಯನ್ನು ಕೈಗೊಳ್ಳಲು ಸಾಧ್ಯವಾಗುವುದಿಲ್ಲ.

ಇ) ಈ ಹಂತದಲ್ಲಿ ಯಾವುದೇ ಅನುದಾನ ನಿಗದಿಪಡಿಸಿರುವುದಿಲ್ಲ.

ಈ) ಬಂದಿದೆ.

ಉ) ಕೊಪ್ಪಳ ತಾಲ್ಲೂಕಿನ ವ್ಯಾಪ್ತಿಯಲ್ಲಿ 2008–09 ಮತ್ತು 2009–10ನೇ ಸಾಲಿನಲ್ಲಿ ವಿವಿಧ ಯೋಜನೆಗಳಡಿ ರೂ.1935.24 ಲಕ್ಷಗಳ ವೆಚ್ಚದಲ್ಲಿ ರಸ್ತೆಗಳ

ಅಭಿವೃದ್ಧಿ ಮತ್ತು ಗುಂಡಿ ಮುಚ್ಚುವ ಕಾಮಗಾರಿಗಳನ್ನು ನಿರ್ವಹಣೆ ಮಾಡಿ ವಾಹನಗಳ ಸಂಚಾರಕ್ಕೆ ಸುಸ್ಥಿತಿಯಲ್ಲಿಡಲಾಗಿದೆ.

ಲೆಕ್ಕ ಶೀರ್ಷಿಕೆ 3054 ಮತ್ತು 5054

192(546) ಶ್ರೀ ಖಾದರ್ ಯು ಟಿ:(ಮಂಗಳೂರು) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ 2008–09 ಮತ್ತು 2009–10ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 3054 ಮತ್ತು 5054ರಡಿಯಲ್ಲಿ ಬಿಡುಗಡೆ ಮಾಡಲಾದ ಅನುದಾನ ಎಷ್ಟು? (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ರಸ್ತೆಗಳು ಸಂಪೂರ್ಣವಾಗಿ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಈ ರಸ್ತೆಗಳ ದುರಸ್ತಿಗಾಗಿ ಲೆಕ್ಕ ಶೀರ್ಷಿಕೆ 3054 ಮತ್ತು 5054ರಡಿಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಗೆ ಎಷ್ಟು ಹಣವನ್ನು ಬಿಡುಗಡೆಗೊಳಿಸಲಾಗುವುದು (ಜಿಲ್ಲೆಯ ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)?

ಶ್ರೀ ಸಿ ಎಂ ಉದಾಸಿ(ಲೋಕೋಪಯೋಗಿ ಸಚಿವರು):

ಅ) ರಾಜ್ಯದಲ್ಲಿ 2008–09 ಮತ್ತು 2009–10ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 3054 ಮತ್ತು 5054ರಡಿಯಲ್ಲಿ ಬಿಡುಗಡೆ ಮಾಡಲಾದ ಅನುದಾನದ ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ಅನುಬಂಧ–1ರಲ್ಲಿ ಒದಗಿಸಲಾಗಿದೆ.

ಆ) ಹೌದು

ಇ) 2010–2011ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಗಳ ರಸ್ತೆಗಳ ದುರಸ್ತಿಗಾಗಿ ಒದಗಿಸಲಾದ ಅನುದಾನಕ್ಕೆ ಸಂಬಂಧಿಸಿದಂತೆ ಜಿಲ್ಲೆಯ ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ಅನುಬಂಧ–4ರಲ್ಲಿ ನೀಡಲಾಗಿದೆ. ಆರ್ಥಿಕ ಇಲಾಖೆಯು ಪ್ರತಿ ಮಾಹೆ ಲೋಕೋಪಯೋಗಿ ಇಲಾಖೆಗೆ ಬಿಡುಗಡೆ ಮಾಡುವ ಹಣಕ್ಕನುಗುಣವಾಗಿ ವಿಭಾಗಗಳ ಬೇಡಿಕೆ, ಬಾಕಿಬಿಲ್ಲು, ಕಾಮಗಾರಿಗಳ ಪ್ರಾಮುಖ್ಯತೆ ಹಾಗೂ ಪ್ರಗತಿಯನ್ನಾಧರಿಸಿ ವಿವಿಧ ಜಿಲ್ಲೆಗಳಿಗೆ ಹಣ ಬಿಡುಗಡೆ ಮಾಡಲಾಗುವುದು.

ಅನುಬಂಧ–1